**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ ನಡವಳಿಗಳು**

ವಿಷಯ: ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ದಿನಗೂಲಿ ಆಧಾರದ ಮೇಲೆ ಕರ್ತವ್ಯ ನಿರ್ವಹಿಸಿರುವವರಿಗೆ ಅನುದಾನ ಬಿಡುಗಡೆ ಮಾಡುವ ಕುರಿತು

ಉಲ್ಲೇಖ:
1. ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ:44:ಸೇಸ್ಥಅ:2013 ದಿ:22.02.2014
2. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/33/ಯುಇಸಿ/2014, ದಿ:14.11.2014
3. ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ:2:ಟಿಎಫ್‌ಪಿ:2020, ದಿನಾಂಕ:30.05.2020
4. ಸರ್ಕಾರದ ಆದೇಶ ಸಂಖ್ಯೆ:ಇಡಿ:85:ಹೆಚ್‌ಪಿಸಿ:2020 ದಿನಾಂಕ:01.10.2020
5. ಈ ಕಛೇರಿಯ ನಡವಳ ಸಂಖ್ಯೆ:ಕಾಶಿಇ/173/ಅಮಾನತ್ತು ದಿ.ನೌ/2019-20/ತವಿ ದಿನಾಂಕ:26.05.2020

****

<u>ಪ್ರಸ್ತಾವನೆ:</u>

ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಉಲ್ಲೇಖ(1)ರ ಸರ್ಕಾರದ ಆದೇಶದಲ್ಲಿ ದಿನಾಂಕ:10.04.2006ರಂದು 10 ವರ್ಷಗಳಗಿಂತ ಕಡಿಮೆ ಇಲ್ಲದಂತೆ ಸೇವೆ ಸಲ್ಲಿಸಿರುವ ದಿನಗೂಲಿ ನೌಕರರನ್ನು ಅವರು 60 ವರ್ಷಗಳ ವಯಸ್ಸು ಪೂರ್ಣವಾಗುವವರೆಗೂ ದಿನಗೂಲಿ ಆಧಾರದ ಮೇಲೆ ಮುಂದುವರಿಸಲು ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ. ಉಲ್ಲೇಖ(2)ರ ಸರ್ಕಾರದ ಆದೇಶದಲ್ಲಿ ಉಲ್ಲೇಖ (1)ರ ಸರ್ಕಾರದ ಅಧಿಸೂಚನೆಯನ್ವಯ ಈ ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ದಿನಗೂಲಿ ನೌಕರರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು 60 ವರ್ಷಗಳ ವಯಸ್ಸು ಪೂರ್ಣವಾಗುವವರೆಗೂ ದಿನಗೂಲಿ ಆಧಾರದ ಮೇಲೆ ಮುಂದುವರಿಸಲು ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ. ಉಲ್ಲೇಖ(3)ರ ಸರ್ಕಾರದ ಆದೇಶದಲ್ಲಿ 2020-21ನೇ ಸಾಲಿನ ಆಯವ್ಯಯದಲ್ಲಿ ಹಂಚಿಕೆ ಮಾಡಿರುವ ಅನುದಾನದಲ್ಲಿ ವೇತನ, ಇತರೆ ಕಛೇರಿ ವೆಚ್ಚ, ಗೌರವಧನ ಮತ್ತು ದಿನಗೂಲಿ/ಗುತ್ತಿಗೆ ಆಧಾರದ ಮೇರೆಗೆ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಆರು ತಿಂಗಳುಗಳ ವೇತನ ಪಾವತಿಗೆ ಅನುದಾನವನ್ನು ಬಿಡುಗಡೆ ಮಾಡಲು ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳಿಗೆ ಆರ್ಥಿಕ ಪ್ರತ್ಯಾಯೋಜನೆಯನ್ನು ನೀಡಿ ಆದೇಶ ಹೊರಡಿಸಲಾಗಿರುತ್ತದೆ. ಉಲ್ಲೇಖ(4)ರ ಸರ್ಕಾರದ ಆದೇಶಗಳಲ್ಲಿ ಉಲ್ಲೇಖ (3)ರ ಸರ್ಕಾರದ ಆರ್ಥಿಕ ಪ್ರತ್ಯಾಯೋಜನೆ ಅನ್ವಯ ನವೆಂಬರ್-2020ರ ಮಾಹೆವರೆಗೆ ಅನುದಾನವನ್ನು ಬಿಡುಗಡೆ ಮಾಡಿ ಆದೇಶಿಸಲಾಗಿರುತ್ತದೆ.

ಪ್ರಸ್ತುತ ಇಲಾಖಾ ವ್ಯಾಪ್ತಿಯಡಿಯಲ್ಲಿ ಬರುವ 16 ಸರ್ಕಾರಿ ಪ್ರಥಮ ದರ್ಜೆ ಕಾಲೇಜು/ವಿದ್ಯಾರ್ಥಿ ನಿಲಯಗಳಲ್ಲಿ ಒಟ್ಟು 17 ದಿನಗೂಲಿ ನೌಕರರು ಕರ್ತವ್ಯ ನಿರ್ವಹಿಸುತ್ತಿದ್ದು, ಇವರಲ್ಲಿ 17 ಸಿಬ್ಬಂದಿಗಳಿಗೆ ನಿಯಮಾನುಸಾರ ಕ್ಲೇಮು ಮಾಡಬೇಕಾಗಿರುವ ವೇತನವನ್ನು ಪಾವತಿಸಲು ಹಾಗೂ ಶ್ರೀ.ನಾಗರಾಜ್.ಡಿ, ಇವರು ಉಲ್ಲೇಖ(5)ರ ಪ್ರಕಾರ ಇವರ ವಿರುದ್ಧದ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ ಅಮಾನತ್ತನ್ನು ತೆರವುಗೊಳಸಿರುವುದರಿಂದ ಇವರಿಗೆ ಬಾಕಿ ಇದ್ದ ಜುಲೈ-2020 ಮತ್ತು ಆಗಸ್ಟ್ -2020ರ ಮಾಹೆಗಳ ವೇತನ ಪಾವತಿಸಲು ಅನುದಾನ ಬಿಡುಗಡೆ ಮಾಡಬೇಕಾಗಿರುತ್ತದೆ. 2020-21ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ:2202-03-103-2-01-034ರಡಿಯಲ್ಲಿ ಒದಗಿಸಿರುವ ಅನುದಾನದಲ್ಲಿ ಸದರಿ ಸಿಬ್ಬಂದಿಗಳಿಗೆ ಸೆಪ್ಟಂಬರ್-2020 ಮಾಹೆಯವರೆಗೆ ವೇತನ ಪಾವತಿಸಲು ರೂ.3,91,951/- ಅನುದಾನವನ್ನು ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರಿಗೆ ಅನುದಾನವನ್ನು ಬಿಡುಗಡೆ ಮಾಡಲು ಈ ಆದೇಶ;

**<u>ಆದೇಶ ಸಂಖ್ಯೆ:ಕಾಶಿಇ/ಆಯವ್ಯಯ/ದಿ.ನೌ.ವೇ/08/2020-21, ಬೆಂಗಳೂರು, ದಿನಾಂಕ:19.10.2020</u>**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಇಲಾಖಾ ವ್ಯಾಪ್ತಿಯಡಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ದಿನಗೂಲಿ ನೌಕರರ ಸೇವೆಯನ್ನು ಅವರುಗಳು 60 ವರ್ಷಗಳ ವಯಸ್ಸು ಪೂರ್ಣವಾಗುವವರೆಗೆ ದಿನಗೂಲಿ ನೌಕರರಾಗಿ ಮುಂದುವರೆಸಿ ಉಲ್ಲೇಖ(1) ಮತ್ತು (2)ರಲ್ಲಿ ಆದೇಶಿಸಿರುವ ಹಿನ್ನಲೆಯಲ್ಲಿ ಈ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧದಲ್ಲಿನ 15 ಕಾಲೇಜು/ವಿದ್ಯಾರ್ಥಿನಿಲಯದ ಒಟ್ಟು 17 ಸಿಬ್ಬಂದಿಗಳಿಗೆ ಅವರ ಹೆಸರಿನ ಮುಂದೆ ನಮೂದಿಸಿರುವ ಮೊತ್ತ **ರೂ.3,91,951/-(ಮೂರು ಲಕ್ಷದ ತೊಂಬತ್ತೊಂದು ಸಾವಿರದ ಒಂಬತ್ತುನೂರ ಐವತ್ತೊಂದು ರೂಪಾಯಿಗಳು ಮಾತ್ರ)** ಅನ್ನು

----2

ಪಾವತಿಸುವ ಸಂಬಂಧ 2020-21ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ: **2202-03-103-2-01-034** ರಡಿಯಲ್ಲಿ ಒದಗಿಸಿರುವ ಅನುದಾನದಲ್ಲಿ ಕಾಲೇಜಿನ ಸಂಬಂಧಪಟ್ಟ ಪ್ರಾಂಶುಪಾಲರುಗಳಿಗೆ ಅನುದಾನ ಬಿಡುಗಡೆ ಮಾಡಲು ಅನುಮತಿ ನೀಡಿ ಆದೇಶಿಸಲಾಗಿದೆ.

**(ಮಾನ್ಯ ಆಯುಕ್ತರಿಂದ ಟಿಪ್ಪಣಿ ಅನುಮೋದಿಸಲ್ಪಟ್ಟಿದೆ)**

19/12/20

**ಕಾಲೇಜು ಶಿಕ್ಷಣ ನಿರ್ದೇಶಕರು**

<u>**ಷರತ್ತುಗಳು :**</u>

1. ಬಿಡುಗಡೆಗೊಳಿಸಿರುವ ಅನುದಾನವನ್ನು ನಿಯಮಾನುಸಾರ ಪರಿಶೀಲಿಸಿ ಬಿಡುಗಡೆಗೊಳಿಸಿರುವ ಉದ್ದೇಶಕ್ಕೆ ಚಾಲ್ತಿಯಲ್ಲಿರುವ ಎಲ್ಲಾ ನಿಯಮಗಳನ್ನು ಪಾಲಿಸಿ ಅದರನ್ವಯವೇ ಪಾವತಿಸುವುದು.
2. ಆದೇಶದ ಅನುಬಂಧದ ಕ್ರ. ಸಂಖ್ಯೆ:5 ಶ್ರೀ. ಡಿ. ನಾಗರಾಜು ಇವರಿಗೆ 01.07.2020 ರಿಂದ 06.07.2020ರ ವರೆಗೆ ವೇತನದ ಶೇಕಡ 50% ಜೀವನಧಾರ ಭತ್ಯೆಯನ್ನು ಪಾವತಿಸಲು 07.07.2020 ರಿಂದ 30.09.2020ರ ವರೆಗೆ ಪೂರ್ಣವಾಗಿ ಪಾವತಿಸಲು ಹಾಗೂ ಮನೆ ಬಾಡಿಗೆಗೆ ಸಂಬಂಧಿಸಿದಂತೆ "ಸಿ" ವರ್ಗೀಕರಣ ದರದಲ್ಲಿ(ಶೇಕಡ 8) ಪಾವತಿಸುವುದು.
3. ಸದರಿ ಅನುದಾನವನ್ನು ಕೆ-2 ತಂತ್ರಾಂಶದಲ್ಲಿ ಕ್ಲೇಮ್ ಮಾಡತಕ್ಕದ್ದು.
4. ಅನುದಾನ ಬಳಕೆಯಾದ ನಂತರ ಕಡ್ಡಾಯವಾಗಿ ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸುವುದು.

<u>**ಇವರಿಗೆ:**</u>

1. ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಅಗತ್ಯ ಕ್ರಮಕ್ಕಾಗಿ.
2. ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು - ಅಂತರ್ಜಾಲದಲ್ಲಿ ಅಳವಡಿಸಲು ಕೋರಿದೆ.
3. ಕಛೇರಿ ಪ್ರತಿ.

ಆದೇಶ ಸಂಖ್ಯೆ:ಕಾಶಿಇ/ಆಯವ್ಯಯ/ದಿ.ನೌ.ವೇ/08/2020-21, ಬೆಂಗಳೂರು, ದಿನಾಂಕ:19.10.2020ಕ್ಕೆ ಅನುಬಂಧ

| ಕ್ರ. ಸಂ | ಸಿಬ್ಬಂದಿಯ ಹೆಸರು | ಕಾಲೇಜಿನ ಹೆಸರು | ಮಾಹೆ | ಮಾಹೆಯಾನ ಪಾವತಿಸಬೇಕಾಗಿರುವ ಮೊತ್ತ | ಸೆಪ್ಟಂಬರ್-2020ರ ಮಾಹೆ ವರೆಗೆ ಬಿಡುಗಡೆ ಮಾಡುತ್ತಿರುವ ಒಟ್ಟು ಅನುದಾನದ ಮೊತ್ತ |
|---|---|---|---|---|---|
| 1 | ಮೂರ್ತಿ.ವಿ.ಎಲ್, | ಸರ್ಕಾರಿ ವಿಜ್ಞಾನ ಕಾಲೇಜು, ಬೆಂಗಳೂರು | ಸೆಪ್ಟಂಬರ್-2020 | 22393 | 22393 |
| 2 | ನಾಗರಾಜ.ಎಂ, | ಸರ್ಕಾರಿ ಆರ್.ಸಿ. ಕಾಲೇಜು, ಬೆಂಗಳೂರು | ಸೆಪ್ಟಂಬರ್-2020 | 22393 | 22393 |
| 3 | ಶಿವರಾಮಯ್ಯ, | ಸರ್ಕಾರಿ ಕಲಾ ಕಾಲೇಜು, ಬೆಂಗಳೂರು | ಸೆಪ್ಟಂಬರ್-2020 | 22393 | 22393 |
| 4 | ಸಿದ್ದರಾಮಯ್ಯ.ಟಿ, | | | 22393 | 22393 |
| 5 | ನಾಗರಾಜ್.ಡಿ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಚಿಂತಾಮಣಿ | 01.07.2020 ರಿಂದ 06.07.2020 | 19945 | 2168 |
| | | | 07.07.2020 ರಿಂದ 31.07.2020 | | 16085 |
| | | | 1.8.2020 ರಿಂದ 30.09.2020 | | 39890 |
| 6 | ಬೆಟ್ಟಯ್ಯ.ಹೆಚ್, | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಸಿರಾ | ಸೆಪ್ಟಂಬರ್-2020 | 19945 | 19945 |
| 7 | ಗಂಗಮ್ಮ, | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಮಧುಗಿರಿ | ಸೆಪ್ಟಂಬರ್-2020 | 19945 | 19945 |
| 8 | ಜಯನರಸಿಂಹ ಮೂರ್ತಿ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕೊರಟಗೆರೆ | ಸೆಪ್ಟಂಬರ್-2020 | 19945 | 19945 |
| 9 | ಓಬಳೇಶಪ್ಪ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಪಾವಗಡ | ಸೆಪ್ಟಂಬರ್-2020 | 19945 | 19945 |
| 10 | ಶಿವಲಿಂಗಯ್ಯ.ಎಂ | ಮಹಾರಾಣಿ ಮಹಿಳಾ ಕಲಾ ಕಾಲೇಜು ಮೈಸೂರು | ಸೆಪ್ಟಂಬರ್-2020 | 21169 | 21169 |
| 11 | ಬಸಮ್ಮ | ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು ವಿದ್ಯಾರ್ಥಿನಿಲಯ, ಮೈಸೂರು | ಸೆಪ್ಟಂಬರ್-2020 | 21169 | 21169 |
| 12 | ನಾಗರಾಜೇಗೌಡ | ಸರ್ಕಾರಿ ಕಲಾ ಕಾಲೇಜು ಹಾಸನ | ಸೆಪ್ಟಂಬರ್-2020 | 19945 | 19945 |
| 13 | ಗಾಯಿತ್ರಿ ಎಂ.ಎಸ್ | ಸರ್ಕಾರಿ ಮಹಿಳಾ ಕಾಲೇಜು ಮಂಡ್ಯ | ಸೆಪ್ಟಂಬರ್-2020 | 19945 | 19945 |
| 14 | ಶಿವಾನಂದ.ಸಿ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಭದ್ರಾವತಿ | ಸೆಪ್ಟಂಬರ್-2020 | 19945 | 19945 |
| 15 | ರಂಗಣ್ಣ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಮಾನ್ವಿ | ಸೆಪ್ಟಂಬರ್-2020 | 19945 | 19945 |
| 16 | ಶಂಕರ ಅಡಿವೆಪ್ಪ | ಸರ್ಕಾರಿ ಕಾಲೇಜು ಕಲಬುರಗಿ | ಸೆಪ್ಟಂಬರ್-2020 | 21169 | 21169 |
| 17 | ಹಿರಗೆಪ್ಪ ರುಕ್ಕಪ್ಪಾ | | | 21169 | 21169 |
| | | | | ಒಟ್ಟು ಮೊತ್ತ | 3,91,951 |

(ಮೂರು ಲಕ್ಷದ ತೊಂಬತ್ತೊಂದು ಸಾವಿರದ ಒಂಬತ್ತುನೂರ ಐವತ್ತೊಂದು ರೂಪಾಯಿಗಳು ಮಾತ್ರ)

ಕಾಲೇಜು ಶಿಕ್ಷಣ ನಿರ್ದೇಶಕರು